ನೀರಾವರಿ ಅಚ್ಚುಕಟ್ಟು ಪ್ರದೇಶಗಳ ಪುನಃಶ್ಚೇತನ

737(775) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

ಅ) ರಾಜ್ಯದ ವಿವಿಧ ನೀರಾವರಿ ಯೋಜನೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ಸವಳು-ಜವಳು ಸಮಸ್ಯೆಯಿಂದ ಬಾಧಿತವಾಗಿರುವ ಕ್ಷೇತ್ರಗಳ ಪುನಃಶ್ಚೇತನಕ್ಕಾಗಿ ಸರ್ಕಾರವು ಕೇಂದ್ರ ಸರ್ಕಾರದ ನಬಾರ್ಡ್‌ನಿಂದ ಆರ್ಥಿಕ ನೆರವನ್ನು ಪಡೆದುಕೊಳ್ಳಲು ಉದ್ದೇಶಿಸಿರುವುದು ನಿಜವಲ್ಲವೇ ; ಹಾಗಿದ್ದಲ್ಲಿ, ಇದಕ್ಕಾಗಿ ಯೋಜನೆಯ ಅಂದಾಜು ವೆಚ್ಚ ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ನಿಗದಿಪಡಿಸಿದ ಮೊತ್ತವೆಷ್ಟು ;

ಆ) ಇದಕ್ಕಾಗಿ ನಬಾರ್ಡ್‌ನಿಂದ ಎಷ್ಟು ಕೋಟಿ ರೂಪಾಯಿಗಳ ಆರ್ಥಿಕ ನೆರವನ್ನು ಪಡೆದುಕೊಳ್ಳಲಾಗುವುದು ;

ಇ) ಈ ಹಣದಿಂದ ರಾಜ್ಯದ ಯಾವ ಯಾವ ಜಿಲ್ಲೆಯ ನೀರಾವರಿ ಯೋಜನೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ಸವಳು-ಜವಳು ಸಮಸ್ಯೆಯನ್ನು ಬಗೆಹರಿಸಲಾಗುವುದು ;

ಈ) ಈ ಯೋಜನೆಯಿಂದ ಬೀದರ್ ಜಿಲ್ಲೆಯ ಯಾವ ಯಾವ ನೀರಾವರಿ ಯೋಜನೆಗಳಿಗೆ ಅನುಕೂಲವಾಗಲಿದೆ ?

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ರಾಜ್ಯದ ವಿವಿಧ ನೀರಾವರಿ ಯೋಜನೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ಸವಳು-ಜವಳು ಸಮಸ್ಯೆಯಿಂದ ಬಾಧಿತವಾಗಿರುವ ಕ್ಷೇತ್ರಗಳ ಪುನಃಶ್ಚೇತನಕ್ಕಾಗಿ ಸರ್ಕಾರವು ನಬಾರ್ಡ್‌ನಿಂದ ಆರ್ಥಿಕ ನೆರವನ್ನು ಪಡೆದುಕೊಳ್ಳುತ್ತಿರುವುದು ನಿಜ.

ಇದಕ್ಕಾಗಿ ಯೋಜನೆಯ ಅಂದಾಜು ವೆಚ್ಚ ತಯಾರಿಸಲಾಗಿದ್ದು, ಯೋಜನೆಯ ಅಂದಾಜು ಮೊತ್ತವು ರೂ.160.00 ಕೋಟಿಗಳಾಗಿರುತ್ತದೆ.

ಆ) ಇದಕ್ಕಾಗಿ ನಬಾರ್ಡ್‌ನಿಂದ ಸಾಲದ ರೂಪದಲ್ಲಿ ರೂ. 76.00 ಕೋಟಿಗಳನ್ನು ಪಡೆದುಕೊಳ್ಳಲಾಗುತ್ತಿದೆ.

ಇ) ಈ ಹಣದಿಂದ ರಾಯಚೂರು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳ ತುಂಗಭದ್ರಾ ಯೋಜನಾ ಪ್ರದೇಶದಲ್ಲಿ, ಬಾಗಲಕೋಟೆ, ಗುಲ್ಬರ್ಗಾ,

ಯಾದಗಿರಿ ಮತ್ತು ಬಿಜಾಪುರ ಜಿಲ್ಲೆಗಳ ಕೃಷ್ಣಾ ಮೇಲ್ದಂಡೆ ಯೋಜನಾ ಪ್ರದೇಶದಲ್ಲಿ, ಬೆಳಗಾಂ ಮತ್ತು ಬಾಗಲಕೋಟೆ ಜಿಲ್ಲೆಗಳ ಘಟಪ್ರಭಾ ಯೋಜನಾ ಪ್ರದೇಶದಲ್ಲಿ ಹಾಗೂ ಧಾರವಾಡ, ಗದಗ ಮತ್ತು ಬಳಗಾಂ ಜಿಲ್ಲೆಗಳ ಮಲಪ್ರಭಾ ಯೋಜನಾ ಪ್ರದೇಶದಲ್ಲಿ ಸವಳು-ಜವಳು ಸಮಸ್ಯೆಯನ್ನು ಬಗೆಹರಿಸಲಾಗುವುದು.

ಈ) ಈ ಯೋಜನೆಯಲ್ಲಿ ಬೀದರ್ ಜಿಲ್ಲೆಯ ಯಾವುದೇ ನೀರಾವರಿ ಯೋಜನೆಗಳು ಸೇರಿರುವುದಿಲ್ಲ.

ಜಲಾಶಯಗಳ ಬಳಿ ಉದ್ಯಾನವನಗಳನ್ನು ನಿರ್ಮಿಸುವುದು

738(776) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ :

ಅ) ರಾಜ್ಯದ ಜಲಾಶಯಗಳಿಗೆ ಪ್ರವಾಸೋದ್ಯಮ ಸ್ಥಳದ ಸ್ಪರ್ಶವನ್ನು ನೀಡುವ ಸಲುವಾಗಿ ರಾಜ್ಯದ ಯಾವ ಯಾವ ಜಲಾಶಯಗಳಡಿಯಲ್ಲಿ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಯೋಜನೆಯನ್ನು ರೂಪಿಸಲಾಗಿದೆ. ಈ ಪ್ರತಿ ಅಂದಾಜು ವೆಚ್ಚವೆಷ್ಟು (ಜಲಾಶಯವಾರು ಅಂಕಿ-ಅಂಶಗಳನ್ನು ಒದಗಿಸುವುದು) ;

ಆ) ಇದಕ್ಕಾಗಿ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ಹಾಗೂ ಈ ಹಣದಿಂದ ಯಾವ ಯಾವ ಜಲಾಶಯಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ ;

ಇ) ಮೇಲ್ಕಂಡ ಯೋಜನೆಗಳಡಿಯಲ್ಲಿ ಅತ್ಯಂತ ಹಿಂದುಳಿದ ಬೀದರ್ ಜಿಲ್ಲೆಯ ಕಾರಂಜಾ ಜಲಾಶಯವನ್ನೂ ಸಹ ಆಯ್ಕೆ ಮಾಡಲಾಗಿದೆಯೇ ;

ಈ) ಹಾಗಿದ್ದಲ್ಲಿ, ಈ ಜಲಾಶಯದಲ್ಲಿ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಸರ್ಕಾರ ಯಾವ ಕ್ರಮಗಳನ್ನು ಹಮ್ಮಿಕೊಂಡಿದೆ ?

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) :

ಅ) ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ಕೆಳಭಾಗದಲ್ಲಿ ಉದ್ಯಾನವನಗಳನ್ನು ಅಭಿವೃದ್ಧಿಪಡಿಸಲು ಅನುಕ್ರಮವಾಗಿ